ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014-15 ದಿನಾಂಕ: 16-10-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ: ಶಿಕ್ಷುತಾ ಪ್ರಶಿಕ್ಷಣ ಬೋರ್ಡ್ (ದಕ್ಷಿಣ ಕ್ಷೇತ್ರ)<br><br>ಆಪೆರೆಂಟೀಸ್‌ಶಿಪ್ ತರಬೇತಿ ಯೋಜನೆ ಕುರಿತು ಕಿರುಚಿತ್ರ ಹಾಗೂ ರಾಷ್ಟ್ರೀಯ ವೆಬ್ ಪೋರ್ಟಲ್‌ನ ನೇರ ಪ್ರಾತ್ಯಕ್ಷಿಕೆ. | 17-10-2015<br><br>ಶನಿವಾರ<br><br>ಬೆಳಿಗ್ಗೆ<br>11-30 ಗಂಟೆಗೆ | ಪ್ರೆಸ್ ಕ್ಲಬ್,<br>ಕಬ್ಬನ್ ಉದ್ಯಾನವನ,<br>ಬೆಂಗಳೂರು |
| 2. | <u>ಬೆಳ್ಳಿ ಸಿನಿಮಾ – ಬೆಳ್ಳಿಮಾತು:</u><br><br>ಬೆಳ್ಳಿ ಸಿನಿಮಾ ಪ್ರದರ್ಶನ – "ಚಿತ್ರಮಂದಿರದಲ್ಲಿ"<br><br><u>ಬೆಳ್ಳಿಮಾತು:</u><br><br>ವಿ. ಚಲ,<br><br>"ಚಿತ್ರಮಂದಿರದಲ್ಲಿ"<br>ಚಿತ್ರದ ನಿರ್ದೇಶಕರು<br><br><u>ಅಧ್ಯಕ್ಷತೆ:</u><br><br>ಎಸ್. ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು<br>ಕರ್ನಾಟಕ ಚಲನಚಿತ್ರ ಅಕಾಡೆಮಿ | 17-10-2015<br><br>ಶನಿವಾರ<br><br>ಸಂಜೆ<br>4-00 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು |

| | | | |
|---|---|---|---|
| | ಮುಖ್ಯ ಅತಿಥಿಗಳು:<br><br>ಬಿ. ಗಣಪತಿ,<br>ಹಿರಿಯ ಪತ್ರಕರ್ತರು.<br><br>ಶ್ರೀಮತಿ ನಮಿತಾ ರಾವ್,<br>ಚಿತ್ರನಟಿ. | | |
| **3.** | ಮನೆಯಂಗಳದಲ್ಲಿ ಮಾತುಕತೆ:<br><br>ತಿಂಗಳ ಅತಿಥಿ:<br><br>ಶ್ರೀಮತಿ ಆರ್. ಟಿ. ರಮಾ,<br><br>ಹಿರಿಯ ಚಲನಚಿತ್ರ ನಟಿ ಹಾಗೂ<br>ರಂಗಕಲಾವಿದೆ. | 17–10–2015<br><br>ಶನಿವಾರ<br><br>ಸಂಜೆ<br>4–00 ಗಂಟೆಗೆ | 'ನಯನ ಸಭಾಂಗಣ'<br>ಕನ್ನಡ ಭವನ,<br>ಜೆ.ಸಿ. ರಸ್ತೆ, ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# "ಕಿಂಗ್ಸ್ ಆಫ್ ಕ್ಯಾಮೋಪ್ಲೇಜ್" ಚಿತ್ರ ಪ್ರದರ್ಶನ

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)

ಬೆಂಗಳೂರಿನ ಜವಾಹರ್‌ಲಾಲ್ ನೆಹರೂ ತಾರಾಲಯದಲ್ಲಿ ಅಕ್ಟೋಬರ್ 18 ರಂದು ಸಂಜೆ 6–00 ಗಂಟೆಗೆ 55 ನಿಮಿಷಗಳ ಅವಧಿಯ ವಿಜ್ಞಾನ ಚಲನಚಿತ್ರ "ಕಿಂಗ್ಸ್ ಅಫ್ ಕ್ಯಾಮೋಪ್ಲೇಜ್" ವನ್ನು ಏರ್ಪಡಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 2220 3234 / 2226 6084 ಅಥವಾ http://www.taralaya.org/monthly_movie.php ಸಂಪರ್ಕಿಸಲು ಕೋರಿದೆ.

ಪಲ್ಲವಿ:ಬಾಬು:ಜಿಪಿಆರ್.

# ನಿರುದ್ಯೋಗಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ :

– ದಿನೇಶ್ ಗುಂಡೂರಾವ್

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)

ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಹಾಗೂ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ ಹಾಗೂ ಸರ್ಕಾರದ ವತಿಯಿಂದ ರಾಷ್ಟ್ರೀಯ ನಗರ ಜೀವನೋಪಾಯ ಮಿಷನ್ 2015-16 ರಡಿಯಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ಆಹಾರ ಮತ್ತು ನಾಗರೀಕ ಸರಬರಾಜು, ಗ್ರಾಹಕ ವ್ಯವಹಾರಗಳ ಖಾತೆ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದರು.

ಅವರು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದಲ್ಲಿ ಇಂದು ಈ ಕುರಿತು ಆಯೋಜಿಸಲಾಗಿದ್ದ ಸಭೆ ಹಾಗೂ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ. ಪಿ.ಯು.ಸಿ., ವಿದ್ಯಾರ್ಹತೆ ಹೊಂದಿರುವವರಿಗೆ ವೆಲ್ಡಿಂಗ್, ಯಂತ್ರದ ಬಳಸುವಿಕೆ, ಟೈಲರಿಂಗ್ ಮುಂತಾದವುಗಳ ಬಗ್ಗೆ ತರಬೇತಿ ನೀಡಲಾಗುವುದು. ಇದು ಮೂರು ತಿಂಗಳ ತರಬೇತಿ ಕಾರ್ಯಕ್ರಮ ಇದಾಗಿದ್ದು ಒಬ್ಬರಿಗೆ ತಿಂಗಳಿಗೆ ರೂ 3000 ಗಳ ಸ್ಟೈಫೆಂಡ್ ನೀಡಲಾಗುವುದು. ಒಬ್ಬರಿಗೆ ರೂ 15,000/- ಗಳ ತರಬೇತಿ ಖರ್ಚನ್ನು ಭರಿಸಲಾಗುವುದೆಂದ ಸಚಿವರು ನಿರುದ್ಯೋಗಿಗಳ ಸಮಸ್ಯೆ ಹೆಚ್ಚಾಗುತ್ತಿರುವ ಈ ಸಮಯದಲ್ಲಿ, ಉದ್ಯೋಗಾಂಕ್ಷಿಗಳಿಗೆ ತರಬೇತಿಯ ಅವಶ್ಯಕತೆ ಇದ್ದು, ಈ ಕಾರ್ಯಕ್ರಮದಿಂದ ಶೇ. 90 ರಷ್ಟು ನಿರುದ್ಯೋಗಿಗಳ ತರಬೇತಿ ಸಿಗಲಿದೆ ಎಂದರು.

ವಿವಿಧ ಉದ್ಯೋಗ ಕ್ಷೇತ್ರದ ಬೇಡಿಕೆಗೆ ಅನುಗುಣವಾಗಿ ತರಬೇತಿ ನೀಡಲು ತೀರ್ಮಾನಿಸಲಾಗಿದ್ದು, ಸುಮಾರು 50,000 ಜನರಿಗೆ, ತರಬೇತಿ ನೀಡಲಾಗುವುದು ಎಂದರು. ಇದಕ್ಕೆ ಸರ್ಕಾರವು ಸಹ ಕೈಜೋಡಿಸಿದ್ದು, ಪೌರಾಡಳಿತ ಇಲಾಖೆಯ ಮೂಲಕ ಇ - ಟೆಂಡರ್ ಪ್ರಕ್ರಿಯೆಯನ್ನು ಮಾಡಲಾಗುವುದು. ಶೀಘ್ರವೇ ಈ ಕಾರ್ಯಕ್ರಮ ಜಾರಿಗೆ ಬರಲಿದೆ ಎಂದರು.

ಸಭೆಯಲ್ಲಿ ಕಾಸಿಯಾ ಅಧ್ಯಕ್ಷರಾದ ವಿ. ಕೆ. ದೀಕ್ಷಿತ್, ಪೌರಾಡಳಿತ ಇಲಾಖೆಯ ನಿರ್ದೇಶಕಿ ಡಾ. ಎನ್. ಮಂಜುಳಾ, ಬಿ.ಬಿ.ಎಂ.ಪಿ., ಸಮಾಜ ಕಲ್ಯಾಣ ಹೆಚ್ಚುವರಿ ಆಯುಕ್ತ ಡಾ ಎಸ್. ವಿ. ಪ್ರಸಾದ್, ಕರ್ನಾಟಕ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಸಂಘದ ಅಧ್ಯಕ್ಷರು ಡಾ. ಬಿ. ಗುರುಪ್ಪ ನಾಯ್ಡು, ಉಪಾಧ್ಯಕ್ಷರಾದ ಎಂ.ಎಂ. ಪತಾನ್, ವ್ಯವಸ್ಥಾಪಕ ನಿರ್ದೇಶಕರಾದ ಮೊಹಮದ್ ಮೊಹಸೀನ್ ಮುಂತಾದವರು ಉಪಸ್ಥಿತರಿದ್ದರು.

ಪಲ್ಲವಿ:ಕವನ:ಜಿಪಿಆರ್

## ಸಚಿವ ಸಂಪುಟದ ಸಭೆ

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)

ರಾಜ್ಯ ಸಚಿವ ಸಂಪುಟದ ಸಭೆಯು ಅಕ್ಟೋಬರ್ 20 ರಂದು ಮಂಗಳವಾರ ಬೆಳಿಗ್ಗೆ 11-00 ಗಂಟೆಗೆ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟದ ಸಭಾಂಗಣದಲ್ಲಿ ನಡೆಯಲಿದೆ.

ಪಲ್ಲವಿ:ಬಾಬು:ಜಿಪಿಆರ್.

## ಉಡುಪಿ ಪರೀಕ್ಷಾ ಕೇಂದ್ರ

**ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು ಅಕ್ಟೋಬರ್ 18 ರಂದು ನಡೆಸುವ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಉಡುಪಿ ಕೇಂದ್ರ ಉಪಕೇಂದ್ರ ಮಾಧವ ಪೈ ಮೆಮೋರಿಯಲ್ ಕಾಲೇಜ್, ವಿದ್ಯಾನಗರ, ಉಡುಪಿ – 576 104 ಎಂದು ಮುದ್ರಣವಾಗಿರುತ್ತದೆ. ಇದನ್ನು ಮಾಧವ ಪೈ ಮೆಮೋರಿಯಲ್ ಕಾಲೇಜ್, ವಿದ್ಯಾನಗರ, ಮಣಿಪಾಲ್ – 576 104 ಎಂದು ಓದಿಕೊಳ್ಳಬೇಕೆಂದು, ಸದರಿ ಸಂಖ್ಯೆಯಲ್ಲಿಯೇ ಪರೀಕ್ಷೆಯನ್ನು ಬರೆಯಬೇಕೆಂದು ಸಂಬಂಧಿತ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.**

ಪಲ್ಲವಿ:ಬಾಬು:ಜಿಪಿಆರ್.

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:

## " ಚಿತ್ರಮಂದಿರದಲ್ಲಿ" ಚಲನಚಿತ್ರ ಪ್ರದರ್ಶನ, ಸಂವಾದ

**ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)**

**ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಅಕ್ಟೋಬರ್ 17 ರ ಶನಿವಾರದಂದು ಬೆಳ್ಳಿ ಸಿನಿಮಾ " ಚಿತ್ರಮಂದಿರದಲ್ಲಿ " ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ವಿ. ಚಲ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.**

**ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಅಕ್ಟೋಬರ್ 17 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಪತ್ರಕರ್ತ ಪಿ. ಗಣಪತಿ, ಚಿತ್ರ ನಟಿ ಶ್ರೀಮತಿ ನಮಿತಾರಾವ್ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

ಹೆಚ್‌ಬಿಡಿ:ಬಾಬು:ಜಿಪಿಆರ್.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:18–10–2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್

ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಕೆಬ್ಬೆಪುರ ಸಿದ್ದರಾಜುರವರಿಂದ ಜನಪದ ಶೈಲಿಯ ತಂಬೂರಿ ಕಥೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಕೀರ್ತನ ಗಂಧರ್ವ ನರಸಿಂಹಯ್ಯ(ದಾಸ) ತಂಡದವರಿಂದ ಕಥಾಕೀರ್ತನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಹಯೋಗದೊಂದಿಗೆ ಗುರು ಶ್ರೀಮತಿ ಭಾನುಮತಿರವರ ಶಿಷ್ಯೆಯಾದ ಸ್ನೇಹಾ ನಾರಾಯಣ್‌ರವರಿಂದ ಭರತ ನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಸಾಯಿ ಆರ್ಟ್ಸ್ ನ್ಯಾಷನಲ್ ಡ್ಯಾನ್ಸ್ ಸ್ಕೂಲ್ ವತಿಯಿಂದ ಭರತ ನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಪ್ರೊ. ಎಸ್. ಛಾಯಾದೇವಿ, ಸಾಹಿತಿಗಳು, ಕನ್ನಡ ಪ್ರಾಧ್ಯಾಪಕರು, ಎಸ್.ಆರ್.ಎಸ್. ಆದರ್ಶ ಸಂಜೆ ಕಾಲೇಜು, ಬೆಂಗಳೂರು ಇವರಿಂದ "ವಿ.ಕೃ. ಗೋಕಾಕರ ಸಾಹಿತ್ಯ ಮತ್ತು ಕನ್ನಡ ಚಿಂತನೆ" ಬಗ್ಗೆ ಉಪನ್ಯಾಸ ಕಾರ್ಯಕ್ರಮವನ್ನು ಮತ್ತು ಸೀಮಾಜವಹರ್ ಅವರಿಂದ ಲಘು ಶಾಸ್ತ್ರೀಯ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.** <u>ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ</u>

- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಸ್ಥಳೀಯ ಆರೋಗ್ಯ ಪರಂಪರೆಗಳ ಪುನರುಜ್ಜೀವನ ಪ್ರತಿಷ್ಠಾನ, ಯಲಹಂಕ (**Foundation For Revitilisation of Local Health Tradition - FRLHT**) ಟ್ರಾನ್ಸ್ ಡಿಸಿಪ್ಲೀನರಿ ಯೂನಿವರ್ಸಿಟಿರವರ ವತಿಯಿಂದ ಔಷಧೀಯ ಗಿಡಗಳ ಪ್ರಾತ್ಯಕ್ಷತೆ ಮತ್ತು ಮಾರಾಟ ಮತ್ತು ಸದರಿ ಸಂಸ್ಥೆಯ ವಿವಿಧ ಪಬ್ಲಿಕೇಷನ್ ಮತ್ತು ಆಸ್ಪತ್ರೆ ಸೇವೆಗಳ ಕುರಿತು ಸಾಮಾಗ್ರಿಗಳ ಪ್ರದರ್ಶನ
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಆಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.

**III.** ಸಮಕಾಲೀನ ಕಾಷ್ಠ ಶಿಲ್ಪಕಲಾ ಶಿಬಿರವು ದಿನಾಂಕ:13–10–2015ರಿಂದ 27–10–2015ರವರೆಗೆ ಕಬ್ಬನ್ ಉದ್ಯಾನವನದಲ್ಲಿ ನಡೆಯುತ್ತಿದ್ದು, ಉದ್ಯಾನವನದ ಟೆನ್ನಿಸ್ ಕ್ರೀಡಾಂಗಣ, ಕೇಂದ್ರ ಗ್ರಂಥಾಲಯ ಮತ್ತು ಬ್ಯಾಂಡ್ ಸ್ಟ್ಯಾಂಡ್ ಬಳಿ ವೀಕ್ಷಿಸಬಹುದು.

ಪಲ್ಲವಿ:ಬಾಬು:ಕೆಎಂ

## <u>ರಾಜ್ಯದಲ್ಲಿ ಪರಿಶಿಷ್ಟರ ಕಲ್ಯಾಣಕ್ಕೆ ಹಲವು ಯೋಜನೆ: ಉತ್ತಮ ಬೆಳವಣಿಗೆ</u>

–ರಾಷ್ಟ್ರೀಯ ಪರಿಶಿಷ್ಟರ ಆಯೋಗದ ಅಧ್ಯಕ್ಷರು

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಸಮುದಾಯದ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿ ಸಮರ್ಪಕವಾಗಿ ಅನುಷ್ಠಾನಗೊಳಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದ ಅಧ್ಯಕ್ಷರಾದ ಡಾ: ಪಿ. ಎಲ್. ಪುನಿಯಾ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ವಿಧಾನ ಸೌಧದಲ್ಲಿ ಇಂದು ಮುಖ್ಯಮಂತ್ರಿ ಅವರ ಕಚೇರಿಯಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಚರ್ಚಿಸಿದ ನಂತರ ವಿಕಾಸ ಸೌಧದಲ್ಲಿ ಪತ್ರಕರ್ತವನ್ನುದ್ದೇಶಿಸಿ ಮಾತನಾಡಿದ ಡಾ:

ಪುನಿಯಾ ಅವರು ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡಗಳ ಸಮುದಾಯಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಹೊಸ ಕಾಯ್ದೆ ತಂದು ಆ ಮೂಲಕ ಆ ಸಮುದಾಯಗಳಿಗೆ ಮೀಸಲಿರಿಸುವ ಹಣವನ್ನು ಆ ವರ್ಗಗಳ ಅಭಿವೃದ್ಧಿಗಾಗಿ ಬಳಸುತ್ತಿರುವುದು ಪ್ರಶಂಸನಿಯ  ಎಂದ ಅವರು ಈ ಹಣ ಬೇರೆ ಕೆಲಸಗಳಿಗೆ ವಿನಿಯೋಗವಾದಂತೆ ನೋಡಿಕೊಳ್ಳಬೇಕು ಎಂದರು.

ಪ್ರಗತಿಪರ ರಾಜ್ಯ ಕರ್ನಾಟಕವಾಗಿದ್ದು ಪರಿಶಿಷ್ಟ ಜಾತಿ ಸಮುದಾಯದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕ್ಷೇತ್ರ ಹೆಚ್ಚು ಒತ್ತು ನೀಡಿದೆ, ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಆರ್ಥಿಕ ನೆರವು ಹಾಗೂ ವಸತಿನಿಲಯಗಳನ್ನು ಒದಗಿಸಿರುವುದು ಉತ್ತಮ ಬೆಳವಣಿಗೆ ಎಂದು ಮಾತನಾಡಿದ ಡಾ: ಪುನಿಯಾ ಅವರು ಪರಿಶಿಷ್ಟಜಾತಿ ಸಮುದಾಯಗಳ ಮೇಲೆ ನಡೆಯುತ್ತಿರುವ  ದೌರ್ಜನ್ಯ ಪ್ರಕರಣಗಳು ತ್ವರಿತವಾಗಿ ವಿಲೇವಾರಿ ಆಗುತ್ತಿಲ್ಲ ಎಂಬ ದೂರುಗಳು ಬಂದಿದೆ ಈ ಬಗ್ಗೆ ಸಂಬಂಧಿಸಿದವರು ಆದ್ಯತೆ ಮೇಲೆ ಪ್ರಕರಣಗಳ ವಿಲೇವಾರಿಗೆ ಕ್ರಮಕೈಗೊಳ್ಳಬೇಕು ಎಂದರು.

ಜಾತಿ ನಿಂದನೆ ಹಾಗೂ ದೌರ್ಜನ್ಯಗಳಿಗೆ ಸಂಬಂಧಿಸಿದಂತೆ ದೂರುಗಳು ದಾಖಲಾಗುತ್ತಿಲ್ಲ ಎಂಬ ಆರೋಪಗಳು ರಾಜ್ಯದಲ್ಲಿ  ಹೆಚ್ಚಿನ ಪ್ರಮಾಣದಲ್ಲಿ ಕಂಡು ಬಂದಿಲ್ಲ ಎಂದ ಆಯೋಗದ ಅಧ್ಯಕ್ಷರು ಹಾಸನ, ರಾಮನಗರ, ಮಂಡ್ಯ, ದಾವಣಗೆರೆ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿಯವರಿಗೆ ದೇವಾಲಯ ಪ್ರವೇಶಕ್ಕೆ ಅವಕಾಶ ನೀಡುತ್ತಿಲ್ಲ ಎಂದು ಹಲವು ದೂರುಗಳು ಬಂದಿವೆ. ಈ ಬಗ್ಗೆ ಸೂಕ್ತ  ಕ್ರಮ ಕೈಗೊಳ್ಳಲು ಆಯಾ ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ ಎಂದು ಮಾತನಾಡಿದರು.

ಪರಿಶಿಷ್ಟ ಜಾತಿ/ಪಂಗಡ ಸಮುದಾಯದವರು ಮೃತಪಟ್ಟಲ್ಲಿ ಕೆಲವು ಭಾಗಗಳಿಗೆ ಶವ ಸಂಸ್ಕಾರ ಮಾಡಲು ಭೂಮಿ ಇಲ್ಲ ಎಂದು ದೂರುಗಳು ಬಂದಿದ್ದು,  ಅಂತಹ ಭಾಗಗಳಲ್ಲಿ ಭೂಮಿ ಒದಗಿಸುವಂತೆ ಸರ್ಕಾರದ ಗಮನಕ್ಕೆ ತರಲಾಗಿದೆ ಎಂದ ಡಾ: ಪುನಿಯಾ ಅವರು ಗ್ರಾಮೀಣ ಭಾಗದಲ್ಲಿ ಕೆಲಸಮಾಡುತ್ತಿರುವ  ಸಫಾಯಿ ಕರ್ಮಚಾರಿಗಳಲ್ಲಿ ಹಲವರಿಗೆ ನೌಕರಿ ಖಾಯಂ  ಆಗಿಲ್ಲ ಎಂಬ ದೂರುಗಳು ಬಂದಿವೆ. ಮತ್ತೊಮ್ಮೆ ಸಮೀಕ್ಷೆ ನಡೆಸಿ ಅವರನ್ನು ಖಾಯಂಗೊಳಿಸಲು ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದರು.

ರಾಜ್ಯದಲ್ಲಿ ಸುಮಾರು 2000 ಬ್ಯಾಕ್‌ಲಾಗ್ ಹುದ್ದೆಗಳು ಇನ್ನೂ ಭರ್ತಿ ಆಗಿಲ್ಲ ಎಂಬ ದೂರುಗಳಿವೆ. ಶೀಘ್ರವೇ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳುವಂತೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದ ಶ್ರೀ ಪುನಿಯಾ. ರಾಜ್ಯದಲ್ಲಿ ನಕಲಿ ಜಾತಿ ಪ್ರಮಾಣ ಪತ್ರಗಳನ್ನು ತಡೆದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಸಿಗಬೇಕಾದ ಸೌಲಭ್ಯವನ್ನು ಪಡೆಯುತ್ತಿರುವ ದೂರುಗಳು ಬಂದಿವೆ ಎಂದ  ಆಯೋಗದ ಅಧ್ಯಕ್ಷರು ಇಂತಹ ಪ್ರಕರಣಗಳನ್ನು ಪತ್ತೆಹಚ್ಚಿ  ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗಬೇಕು ಎಂದರು.

ರಾಜ್ಯಗಳಲ್ಲಿ ಹಲವು ಸಮುದಾಯಗಳನ್ನು ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿಸಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಡಾ. ಪುನಿಯಾ ಅವರು ಬೇರೆ ಜಾತಿಗಳನ್ನು ಪರಿಶಿಷ್ಟ ಜಾತಿಗೆ ಸೇರಿಸುವ ಅಧಿಕಾರ ರಾಜ್ಯ ಸರ್ಕಾರಕ್ಕಿಲ್ಲ.  ಕೇಂದ್ರ ಸರ್ಕಾರಕ್ಕೆ ಮತ್ತು ಆಯೋಗಕ್ಕೆ  ಪ್ರಸ್ತಾಪ ಸಲ್ಲಿಸಬಹುದು.  ಕೇಂದ್ರ ಸರ್ಕಾರ ಸಚಿವ ಸಂಪುಟದ ಮುಂದೆ ವಿಷಯ ಮಂಡಿಸಿ ಪಾಸ್ ಮಾಡಿದ ನಂತರ ಸದನಗಳಲ್ಲಿ ಮಂಡಿಸಿ ಅಲ್ಲಿ ತೀರ್ಮಾನಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ರಾಜ್ಯದಲ್ಲಿ ಮೂರು ದಿನಗಳ ಕಾಲ ಪ್ರವಾಸ ಮಾಡಿ ಚುನಾಯಿತ ಜನಪ್ರತಿನಿಧಿಗಳು ಸಂಘ ಸಂಸ್ಥೆಗಳು, ಅಧಿಕಾರಿಗಳ ಸಾರ್ವಜನಿಕರನ್ನು ಸಂಪರ್ಕಿಸಿ ಮಾಹಿತಿ ಸಂಗ್ರಹಿಸಿ ಅವರೊಂದಿಗೆ ಚರ್ಚಿಸಲಾಗಿದೆ ಎಂದು ಪುನಿಯಾ ಅವರು  ತಿಳಿಸಿದರು.

ರಾಷ್ಟ್ರೀಯ ಪರಿಶಿಷ್ಟ ಜಾತಿ ಆಯೋಗದ ಉಪಾಧ್ಯಕ್ಷರಾದ ಶ್ರೀ ರಾಜುಕುಮಾರ್ ವೆರೇಕ್, ಕಾರ್ಯದರ್ಶಿ ಡಾ. ವಿನೋದ್ ಅಗರ್‌ವಾಲ್, ಸದಸ್ಯರಾದ ಶ್ರೀಮತಿ ಕಮಲಮ್ಮ, ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಗಂಗಾರಾಂ ಬಡಾರಿಯಾ ಸಮಾಜ ಕಲ್ಯಾಣ ಸಚಿವರ ಸಲಹೆಗಾರರಾದ ಇ. ವೆಂಕಟಯ್ಯ, ಆಯುಕ್ತರಾದ ಶ್ರೀಮತಿ ಎಂ.ವಿ. ಸಾವಿತ್ರಿ ಅವರು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ)

ಪಲ್ಲವಿ:ಕೆಪಿಪಿ:ಕೆಎಂ

# ಲೈಂಗಿಕ ಕಾರ್ಯಕರ್ತರ ಅಧ್ಯಯನ ಹಾಗೂ ಅವರ ಅಭಿವೃದ್ಧಿಗೆ ಜಯಮಾಲ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ)

ಹೆಣ್ಣು ಮಕ್ಕಳು ಹಾಗೂ ಲೈಂಗಿಕ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸವಾಗಬೇಕಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶ್ರೀಮತಿ ಉಮಾಶ್ರೀ ಅವರು ತಿಳಿಸಿದರು.

ವಿಕಾಸ ಸೌಧದಲ್ಲಿ ಇಂದು ನಡೆದ ಲೈಂಗಿಕ ಕಾರ್ಯಕರ್ತರ ಸ್ಥಿತಿಗತಿ ಬಗ್ಗೆ ಅಧ್ಯಯನ ನಡೆಸುವ ಸಲುವಾಗಿ ವಿಧಾನ ಪರಿಷತ್ ಸದಸ್ಯೆ ಶ್ರೀಮತಿ ಜಯಮಾಲ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ಮೊದಲ ಸಭೆಯಲ್ಲಿ ಮಾತನಾಡಿದ ಸಚಿವೆ ಉಮಾಶ್ರೀ ಅವರು ಲೈಂಗಿಕ ಅಲ್ಪಸಂಖ್ಯಾತರ ಸಮಸ್ಯೆಗಳು, ಆರ್ಥಿಕ ಸಬಲೀಕರಣ ಹಾಗೂ ಅವರ ಮಕ್ಕಳಿಗೆ ಉತ್ತಮ ವಿಧ್ಯಾಭ್ಯಾಸ ನೀಡುವುದು ಲೈಂಗಿಕ ಕಾರ್ಯಕರ್ತೆಯರ ಅಧ್ಯಯನ ಸಮಿತಿಯ ಮುಖ್ಯ ಕರ್ತವ್ಯವಾಗಿದೆ ಎಂದರು.

ದೇಶದಲ್ಲೇ ಮೊದಲಬಾರಿಗೆ ನಮ್ಮ ಸರ್ಕಾರ "ಲೈಂಗಿಕ ಕಾರ್ಯಕರ್ತರ ನೀತಿಯನ್ನು" ರೂಪಿಸುವ ಸಲುವಾಗಿ ಸಮಿತಿಯೊಂದನ್ನು ರಚಿಸಿದೆ ಎಂದು ಮಾತನಾಡಿದ ಸಮಿತಿಯ ಅಧ್ಯಕ್ಷೆ ಜಯಮಾಲ ಇಂದು ಮಹಿಳೆಯರು ಹಾಗೂ ಲೈಂಗಿಕ ಅಲ್ಪಸಂಖ್ಯಾತರ ಮೇಲೆ ಹಲವು ರೀತಿಯ ಅನ್ಯಾಯಗಳು ನಡೆಯುತ್ತಿದೆ. ದೇವದಾಸಿಯರ ಬದುಕು ಕೂಡ ಶೋಚನೀಯವಾಗಿದೆ. ಇಂತಹ ನೊಂದ ಮಹಿಳೆಯರ ಬದುಕನ್ನು ಸುಧಾರಿಸುವ ನಿಟ್ಟಿನಲ್ಲಿ ಲೈಂಗಿಕ ಕಾರ್ಯಕರ್ತೆಯ ನೀತಿ ರೂಪಿಸುವ ಸಮಿತಿ ಕೆಲಸ ಮಾಡಲಿದೆ ಎಂದರು.

ಸಮಿತಿಯ ಸದಸ್ಯರು ಹಾಗೂ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಶ್ರೀಮತಿ ಮಂಜುಳ ಮಾನಸ ಅವರು ಇದೇ ಸಂದರ್ಭದಲ್ಲಿ ಮಾತನಾಡಿದರು.

ಸಮಿತಿಯ ಸದಸ್ಯರುಗಳಾದ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಕೆ.ವಿ.ಆರ್. ಠ್ಯಾಗೂರ್, ಡಾ: ಲೀಲಾ ಸಂಪಿಗೆ, ಶಾಂತಮ್ಮ ಮದ್ದೂರು, ದು. ಸರಸ್ವತಿ ಪಾಟೀಲ್ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಜನೀಶ್ ಗೋಯಲ್ ಹಾಗೂ ಹಿರಿಯ ಅಧಿಕಾರಿಗಳು ಮೊದಲ ಸಭೆಯಲ್ಲಿ ಪಾಲ್ಗೊಂಡಿದ್ದರು.

ಪಲ್ಲವಿ:ಕೆಪಿಪಿ:ಕೆಎಂ

# **Training**

**Bangalore, October 16 (Karnataka Information)**

**The Mysore Horticultural Society is conducting One day free training class on PITH WORK (Making arts in soft substance in plants) by State Awarded Smt. Usha Nagaraj on 17th October 2015 from 2.00 p.m. to 5.00 p.m. at Dr. M.H. Marigowda Memorial Hall, Lalbagh, Bangalore.**

**For details contact the Secretary, Mysore Horticultural Society, Lalbagh, Bangalore-4 (Phone-2657 6781 or Mobile: 9845803474/ 9986737142)**

**pallavi/km**